ಇ) ಈ ಮದ್ಯದಂಗಡಿಗಳನ್ನು ತೆರೆಯಲು ಯಾವ ಮಾನದಂಡವನ್ನು ಅನುಸರಿಸಲಾಗಿದೆ?

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ಹೌದು.

ಆ) ರಾಜ್ಯಾದ್ಯಂತ ಪ್ರತಿ ತಾಲ್ಲೂಕಿಗೆ ಕನಿಷ್ಠ ಎರಡು ಸನ್ನದುಗಳಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರ ಸ್ಥಾನಕ್ಕೆ ತಲಾ ಎರಡರಂತೆ 58 ಸನ್ನದುಗಳು ಹಾಗೂ ಎಂ.ಎಸ್.ಐ.ಎಲ್. ಸಂಸ್ಥೆಯವರ ಪ್ರಾದೇಶಿಕ ಬೇಡಿಕೆ ಅಧ್ಯಯನವನ್ನು ಆಧರಿಸಿ ಕೋರಿಕೆ ಸಲ್ಲಿಸುವ ಇತರೆ 53 ಸ್ಥಳಗಳಿಗೆ ಸನ್ನದುಗಳನ್ನು ನೀಡಲು ನಿರ್ಧರಿಸಲಾಗಿದೆ.

ಇ) ಕರ್ನಾಟಕ ಅಬಕಾರಿ (ದೇಶೀ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು, 1968ರ ನಿಯಮ 3(11-C) ರನ್ವಯ ಸರ್ಕಾರಿ ಸ್ವಾಮ್ಯದ ಕಂಪನಿ/ ಸಂಸ್ಥೆಗಳಿಗೆ ಚಿಲ್ಲರೆ ಮದ್ಯ ಮಾರಾಟದ ಅಂಗಡಿಗಳ ಸನ್ನದುಗಳನ್ನು ನೀಡಲು ಇರುವ ಅವಕಾಶವನ್ನು ಹಾಗೂ ಮಂಜೂರಾಗಿದ್ದ 463 ಸನ್ನದುಗಳು ನವೀಕರಣಗೊಳ್ಳದೆ ಇದ್ದುದರಿಂದ, ಸದರಿ ಸಂಖ್ಯೆಯಷ್ಟೇ ಸನ್ನದುಗಳನ್ನು ನೀಡಲು ಪರಿಗಣನೆಗೆ ತೆಗೆದುಕೊಂಡು ಸರ್ಕಾರಿ ಸಾಮ್ಯದ ಎಂ.ಎಸ್.ಐ.ಎಲ್. ಸಂಸ್ಥೆಗೆ ನಮೂನೆ ಸಿಎಲ್– (11-C) ಯಲ್ಲಿ ಚಿಲ್ಲರೆ ಮದ್ಯ ಮಾರಾಟದ ಅಂಗಡಿಗಳನ್ನು ತೆರೆಯಲು ಅನುಮತಿಸಲಾಗಿರುತ್ತದೆ.

ಪ್ರೌಢ ಶಿಕ್ಷಣ ಇಲಾಖೆಗೆ ಗ್ರೂಪ್ "ಡಿ" ನೌಕರರನ್ನು ಖಾಯಂಗೊಳಿಸುವ ಬಗ್ಗೆ

342 (716) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರೌಢಶಿಕ್ಷಣ ಇಲಾಖೆಗೆ ಸರಕಾರವು "ಡಿ" ಗ್ರೂಪ್ ನೌಕರರನ್ನು ಹೊರಸಂಪನ್ಮೂಲ ದಿಂದ ತೆಗೆದುಕೊಳ್ಳಲು ನಿರ್ಧರಿಸಿರುವ ಕಾರಣವೇನು;

ಆ) ಸದರಿ "ಡಿ" ಗ್ರೂಪ್ ನೌಕರರನ್ನು ಖಾಯಂ ಆಗಿ ನೇಮಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ದಿ: 17.01.2005 ಹಾಗೂ ದಿ: 22.02.2005 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುತ ಸಮಿತಿಯ ಸಭೆಯ ತೀರ್ಮಾನದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 1233 'ಡಿ'–ಗ್ರೂಪ್ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡಿದೆ.

ಆ) ಇಲ್ಲ.

ಗ್ರಾಮ ಪಂಚಾಯತಿ ಚುನಾವಣೆಯ ಅಧಿಸೂಚನೆ

344 (718) ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮ ಪಂಚಾಯತಿ ಸದಸ್ಯರ ಅವಧಿಯು ಮುಗಿದಿದ್ದು ಮಾರ್ಚ್‌ನಲ್ಲಿ ಚುನಾವಣೆ ನಡೆಸಬೇಕಾಗಿದ್ದು ಯಾವಾಗ : ಅಧಿಸೂಚನೆ ಹೊರಡಿಸಲಾಗುವುದು;

ಆ) ಯಾವಾಗ ಚುನಾವಣೆಯನ್ನು ನಡೆಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) ಹಾಲಿ ಇರುವ ಗ್ರಾಮ ಪಂಚಾಯತಿಗಳ ಅವಧಿಯು 2010 ಮಾರ್ಚಿ ಕೊನೆಯವಾರದಲ್ಲಿ ಮತ್ತು ಏಪ್ರಿಲ್ ಮಾಹೆಯಲ್ಲಿ ಮುಕ್ತಾಯವಾಗಲಿದೆ. ಚುನಾವಣೆಯನ್ನು ನಡೆಸಲು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲು ಸೂಚನೆಗಳನ್ನು ನೀಡಲಾಗಿದೆ.

2010 ರ ಏಪ್ರಿಲ್/ಮೇ ಮಾಹೆಯಲ್ಲಿ ಗ್ರಾಮ ಪಂಚಾಯತಿಗಳಿಗೆ ಚುನಾವಣೆಯನ್ನು ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಂಡಿರುವುದಾಗಿದ್ದು ರಾಜ್ಯ ಚುನಾವಣಾ ಆಯೋಗ ತಿಳಿಸಿದ್ದು, ಚುನಾವಣಾ ವೇಳಾಪಟ್ಟಿಯನ್ನು ಆಯೋಗವೇ ಹೊರಡಿಸುತ್ತದೆ.